Akashvani : Bangalore
Regional Bulletin In Kannada
30.06.2025 / 18.40 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
<><*<><>*><>

<u>ಮುಖ್ಯಾಂಶಗಳು</u>

೧. ಮುಖ್ಯಮಂತ್ರಿ ಬದಲಾವಣೆ ವಿಚಾರದಲ್ಲಿ ಹೈಕಮಾಂಡ್ ನಿರ್ಧಾರವೇ ಅಂತಿಮ - ಮಲ್ಲಿಕಾರ್ಜುನ ಖರ್ಗೆ

೨. ರಾಜ್ಯದ ಎಲ್ಲಾ ಜಲಾಶಯಗಳಿಂದ ನಾಲೆಗಳಿಗೆ ತಕ್ಷಣದಿಂದ ನೀರು ಹರಿಸಲು ಮುಖ್ಯಮಂತ್ರಿ ಆದೇಶ

೩. ಹುಲಿ ಸಾವಿನ ಪ್ರಕರಣ : ಅಧಿಕಾರಿಗಳ ನಿರ್ಲಕ್ಷ್ಯ ಸಾಬೀತಾದರೆ ಶಿಸ್ತು ಕ್ರಮ - ಅರಣ್ಯ ಸಚಿವರ ಸ್ಪಷ್ಟನೆ

೪. ಬೆಳಗಾವಿ ಜಿಲ್ಲೆಯಲ್ಲಿ ಪೋಡಿ ಮುಕ್ತಗ್ರಾಮ ಅಭಿಯಾನ ಹಮ್ಮಿಕೊಳ್ಳಲು ಕಂದಾಯ ಸಚಿವರ ಸೂಚನೆ

<><*<><>*><>

ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಮಾಡುವ ವಿಚಾರದಲ್ಲಿ ಹೈಕಮಾಂಡ್ ನಿರ್ಧಾರವೇ ಅಂತಿಮ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಹೈಕಮಾಂಡ್ ನಲ್ಲಿ ಏನು ನಡೆಯುತ್ತಿದೆ ಎಂಬುದನ್ನು ಯಾರಿಂದಲೂ ಊಹಿಸಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಯಾರೂ ಅನಗತ್ಯ ಸಮಸ್ಯೆಗಳನ್ನು ಸೃಷ್ಟಿಸುವಲ್ಲಿ ತೊಡಗಬಾರದು" ಎಂದು ಅವರು ಎಚ್ಚರಿಕೆ ನೀಡಿದ್ದಾರೆ. ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಮತ್ತು ಕರ್ನಾಟಕ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಪ್ರತಿಕ್ರಿಯಿಸಿ ನಾಯಕತ್ವ ಬದಲಾವಣೆ ಬರೀ ಕಲ್ಪನೆ' ಎಂದು ತಳ್ಳಿಹಾಕಿದ್ದಾರೆ.

<><*<><>*><>

ರಾಜ್ಯದ ಎಲ್ಲಾ ಜಲಾಶಯಗಳು ತುಂಬಿದ್ದು, ಎಲ್ಲಾ ನಾಲೆಗಳಿಗೂ ತಕ್ಷಣದಿಂದ ನೀರು ಹರಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆದೇಶ ನೀಡಿದ್ದಾರೆ. ಮಂಡ್ಯದ ಕೆಆರ್‌ಎಸ್ ಜಲಾಶಯದಲ್ಲಿಂದು ಬಾಗಿನ ಅರ್ಪಿಸಿ ಮಾತನಾಡಿದ ಅವರು, ತಮ್ಮ ಸರ್ಕಾರ ೫ ವರ್ಷ ಬಂಡೆ ರೀತಿ ಕಾರ್ಯ ನಿರ್ವಹಿಸಲಿದೆ ಎಂದು ತಿಳಿಸಿದ್ದಾರೆ.

ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ ( ೩೨ ಸೆಕೆಂಡುಗಳು)

<><*<><>*><>

ಮೀಣ್ಯಂ ಅರಣ್ಯದಲ್ಲಿ ೫ ಹುಲಿಗಳ ಅಸಹಜ ಸಾವಿನ ಕುರಿತಂತೆ ಆರೋಪಿಗಳನ್ನು ಈಗಾಗಲೇ ಬಂಧಿಸಲಾಗಿದ್ದು, ಅವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುತ್ತಿದೆ. ಈ ಪ್ರಕರಣದಲ್ಲಿ ಯಾವುದೇ ಅಧಿಕಾರಿಯ ನಿರ್ಲಕ್ಷ್ಯ ಕಂಡುಬಂದಿಲ್ಲ, ಶಿಸ್ತುಕ್ರಮ ಜರುಗಿಸಲಾಗುವುದು ಎಂದು ಈಶ್ವರ ಖಂಡ್ರೆ ಸ್ಪಷ್ಟಪಡಿಸಿದರು. ಕಾಡುಗೋಡಿ ಪ್ಲಾಂಟೇಷನ್ ನ ೧೨೦ಎಕರೆ ಅರಣ್ಯಭೂಮಿ ಮರುವಶಪಡಿಸಿ ಕೊಂಡಿರುವ ಹಿನ್ನೆಲೆಯಲ್ಲಿ ಬಿಜೆಪಿ ನಾಯಕರು ಇಂದು ವಿಧಾನಸೌಧದ ಗಾಂಧೀ ಪ್ರತಿಮೆ ಬಳಿ ಪ್ರತಿಭಟನೆ ನಡೆಸಿದ ಬಗ್ಗೆ ಮಾಧ್ಯಮ ಪ್ರತಿನಿಧಿಗಳು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ಅರಣ್ಯಭೂಮಿಯನ್ನು ಹಂಚಿಕೆ, ಮಂಜೂರು ಮಾಡಲು ಬರುವುದಿಲ್ಲ. ಅರಣ್ಯೇತರ ಉದ್ದೇಶಕ್ಕೆ ಅರಣ್ಯಭೂಮಿ ಬಳಸಲು ಕೇಂದ್ರ ಸರ್ಕಾರ ಮತ್ತು ಸುಪ್ರೀಂಕೋರ್ಟ್ ಅನುಮತಿ ಕಡ್ಡಾಯ ಎಂದರು. ಬೆಂಗಳೂರು ಪೂರ್ವ ತಾಲೂಕು, ಬಿದರಹಳ್ಳಿ ಹೋಬಳಿಯ ಕಾಡುಗೋಡಿ ಪ್ಲಾಂಟೇಷನ್ ಸರ್ವೆ ನಂ.೧ ರಲ್ಲಿ ೭೧೧ ಎಕರೆಯನ್ನು ನೆಡುತೋಪಿಗಾಗಿ ೧೮೯೬ ರಲ್ಲಿ ನೀಡಲಾಗಿರುತ್ತದೆ. ಬಳಿಕ ೧೯೦೧ರಲ್ಲಿ ಅರಣ್ಯ ನಿಯಮಗಳು ೧೯೦೦ರ ಅಡಿಯಲ್ಲಿ ರಾಜ್ಯ ಅರಣ್ಯ ಎಂದು ಅಧಿಸೂಚನೆ ಮಾಡಲಾಗಿರುತ್ತದೆ. ಅದು ಅಧಿಸೂಚಿತ ಅರಣ್ಯ ಮೀಸಲು ಅರಣ್ಯವಾಗಿರುತ್ತದೆ ಎಂದರು.

<><*<><>*><>

ಅವಳಿ ನಗರದ ಅಭಿವೃದ್ದಿಗೆ ಒತ್ತು ನೀಡುವುದಾಗಿ ನೂತನ ಮೇಯರ್ ಜ್ಯೋತಿ ಪಾಟೀಲ್ ಭರವಸೆ ನೀಡಿದ್ದಾರೆ. ಮೇಯರ್ ಆಗಿ ಆಯ್ಕೆಯಾದ ಬಳಿಕ ಮಾತನಾಡಿದ ಅವರು, ಶುದ್ದ ಕುಡಿಯುವ ನೀರು ಹಾಗೂ ಕಸವಿಲೇವಾರಿ ದೊಡ್ಡ ಸಮಸ್ಯೆಯಾಗಿದ್ದು, ಇವೆರಡನ್ನೂ ಪ್ರಥಮ ಹಂತದಲ್ಲಿ ಕೈಗೆತ್ತಿಕೊಂಡು ಕೆಲಸ ಮಾಡುವುದಾಗಿ ಭರವಸೆ ನೀಡಿದ್ದಾರೆ. ಮಹಾನಗರ ಪಾಲಿಕೆಯ ಹಿರಿಯ ಸದಸ್ಯರನ್ನು ವಿಶ್ವಾಸಕ್ಕೆ ತಗೆದುಕೊಂಡು ಹುಬ್ಬಳ್ಳಿ-ಧಾರವಾಡ ಸೌಂದರ್ಯ, ಆರೋಗ್ಯ ದೃಷ್ಟಿಯಿಂದ ಆಸ್ಪತ್ರೆಗಳ ಸುಧಾರಣೆ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುವುದು ಎಂದು ಹೇಳಿದರು.

ಧ್ವನಿ - ಜ್ಯೋತಿ ಪಾಟೀಲ್, ನೂತನ ಮೇಯರ್

<><*<><>*><>

ನಾಡಪ್ರಭು ಕೆಂಪೇಗೌಡರ ಮೂಲ ಸ್ಥಳವಾದ ಆವತಿ ಗ್ರಾಮದ ಬಳಿ ೯.೧೦ ಎಕರೆ ಪ್ರದೇಶದಲ್ಲಿ ನಾಡಪ್ರಭು ಕೆಂಪೇಗೌಡರ ಜೀವನ ಚರಿತ್ರೆ, ತ್ಯಾಗ, ಹೋರಾಟ, ಸಮಾಜ ಸೇವೆಗಳ ಸಮಗ್ರ ಇತಿಹಾಸವನ್ನು ತಿಳಿಸುವ ಸಲುವಾಗಿ ಅವರ ನೆನಪಿನಲ್ಲಿ ಸ್ಮಾರಕ, ವಸ್ತು ಸಂಗ್ರಹಾಲಯ ನಿರ್ಮಿಸಲಾಗುವುದು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್.ಮುನಿಯಪ್ಪ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ವತಿಯಿಂದ ನಡೆದ ಜಿಲ್ಲಾ ಮಟ್ಟದ ನಾಡಪ್ರಭು ಶ್ರೀ ಕೆಂಪೇಗೌಡರ ೫೧೬ ನೇ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ನಾಡಪ್ರಭು ಕೆಂಪೇಗೌಡರ ದೂರದೃಷ್ಟಿಯಿಂದ ಬೆಂಗಳೂರು ನಗರ ವೇಗವಾಗಿ ಹಾಗೂ ಆರ್ಥಿಕವಾಗಿ ಬೆಳೆಯುತ್ತಿದೆ. ಅಂದು ಕೆಂಪೇಗೌಡರು ಹಾಕಿದ್ದ ಅಡಿಪಾಯವೇ ಇಂದಿನ ಬೃಹತ್ ಬೆಂಗಳೂರು ನಗರವಾಗಲು ಸಾಧ್ಯವಾಯಿತು ಎಂದು ಹೇಳಿದರು.

<><*<><>*><>

ಪ್ರವಾಹ ಪರಿಸ್ಥಿತಿ ಸಮರ್ಪಕವಾಗಿ ನಿರ್ವಹಿಸಲು ಗ್ರಾಮ ಪಂಚಾಯತಿಗಳಲ್ಲಿ ರಚಿಸಲಾದ ವಿಶೇಷ ಕಾಂiiಪಡೆಗಳು ಜವಾಬ್ದಾರಿಯುತವಾಗಿ ಕಾರ್ಯ ನಿರ್ವಹಿಸಿದರೆ ಪ್ರವಾಹದಿಂದ ಆಗಬಹುದಾದ ಸಂಭವನೀಯ ಹಾನಿ ತಡೆಗಟ್ಟಬಹುದಾಗಿದೆ ಎಂದು ಕಂದಾಯ ಸಚಿವರಾದ ಕೃಷ್ಣ ಭೈರೇಗೌಡ ತಿಳಿಸಿದರು. ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಇಂದು ಜರುಗಿದ ಕಂದಾಯ ಇಲಾಖೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರಸಕ್ತ ಮುಂಗಾರಿನಲ್ಲಿ ವಾಡಿಕೆಗಿಂತ ಹೆಚ್ಚಿನ ಮಳೆ ಆಗುತ್ತಿದ್ದು ಎಲ್ಲ ನದಿಗಳ ಒಳ ಹರಿವು ಹೆಚ್ಚಾಗುತ್ತಿದೆ. ಅತಿಯಾದ ಮಳೆಯಿಂದಾಗಿ ಸಂಭವನೀಯ ಪ್ರವಾಹಕ್ಕೆ ಒಳಗಾಗಬಹುದಾದ ಗ್ರಾಮಗಳಲ್ಲಿನ ಜನ ಜಾನುವಾರುಗಳನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲು ಕ್ರಮ ವಹಿಸಬೇಕು. ಈ ಕಾರ್ಯದಲ್ಲಿ ಅಗತ್ಯ ಬಿದ್ದರೆ ಪೋಲಿಸ್ ಸಿಬ್ಬಂದಿಗಳ ಸಹಾಯ ಪಡೆದುಕೊಳ್ಳುವಂತೆ ಅವರು ಸೂಚಿಸಿದರು. ಜಿಲ್ಲೆಯಲ್ಲಿ ಪೋಡಿಮುಕ್ತ ಗ್ರಾಮ ಅಭಿಯಾನವನ್ನು ಹಮ್ಮಿಕೊಳ್ಳಬೇಕು. ತಹಶೀಲ್ದಾರ್, ಉಪವಿಭಾಗಾಧಿಕಾರಿಗಳ ಹಂತದಲ್ಲಿನ ಕೋರ್ಟ್ ಕೇಸುಗಳನ್ನು ತ್ವರಿತವಾಗಿ ವಿಲೇ ಮಾಡಬೇಕು. ಗ್ರಾಮಲೆಕ್ಕಾಧಿಕಾರಿಗಳಿಗೆ ಸ್ಥಳೀಯವಾಗಿ ಕಾರ್ಯನಿರ್ವಹಿಸಲು ಅನುಕೂಲವಾಗಲು ಗ್ರಾಮ ಪಂಚಾಯತಿಗಳಲ್ಲಿ ಕಾರ್ಯ ನಿರ್ವಹಿಸಲು ಸ್ಥಳಾವಕಾಶ ಒದಗಿಸಲಾಗಿದೆ ಎಂದರು. ಸಾಮಾಜಿಕ ಭದ್ರತೆ ಯೋಜನೆಯಡಿ ನೀಡಲಾಗುತ್ತಿರುವ ವಿವಿಧ ಪಿಂಚಣಿಗಳು ಅರ್ಹ ಫಲಾನುಭವಿಗಳಿಗೆ ದೊರಕುವಂತಾಗಬೇಕು. ಜಿಲ್ಲೆಯಲ್ಲಿ ಅನರ್ಹರಿಗೆ ಪಿಂಚಣಿ ನೀಡಲಾಗುತ್ತಿರುವ ಕುರಿತು ದೂರುಗಳು ಬಂದಿದ್ದು ಈ ಕುರಿತು ಪರಿಶೀಲಿಸಿ ವರದಿ ನೀಡಲು ಸಚಿವ ಕೃಷ್ಣ ಭೈರೇಗೌಡ ಸೂಚಿಸಿದರು.

<><*<><>*><>

ಕೃಷಿ ಹಾಗೂ ತೋಟಗಾರಿಕೆಯಲ್ಲಿ ಆಧುನಿಕ ಪದ್ಧತಿಯನ್ನು ಅನುಸರಿಸಿ ಆದಾಯ ಕಂಡುಕೊಳ್ಳಬೇಕು. ಕಡಿಮೆ ಖರ್ಚಿನಲ್ಲಿ ಹೆಚ್ಚಿನ ಆದಾಯ ಬರುವಂತಹ ಬೆಳೆಗಳನ್ನು ಬೆಳೆಯುವ ಕಡೆಗೆ ರೈತರು ಮುಂದಾಗಬೇಕು ಎಂದು ಶಾಸಕ ಜಿ.ಟಿ.ದೇವೇಗೌಡ ತಿಳಿಸಿದ್ದಾರೆ. ಮೈಸೂರು ತಾಲ್ಲೂಕಿನ ತೋಟಗಾರಿಕೆ ಮಹಾವಿದ್ಯಾಲಯದ ಆವರಣದಲ್ಲಿ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಪುತ್ತೂರು ಗೇರು ಸಂಶೋಧನಾ ನಿರ್ದೇಶನಾಲಯದ ಸಹಯೋಗದೊಂದಿಗೆ ಹುಣಸೂರು ತಾಲ್ಲೂಕಿನಕೆಬ್ಬೆಕೊಪ್ಪಲು ಗ್ರಾಮದ ರೈತರಿಗೆ ಏರ್ಪಡಿಸಿದ್ದ ತೋಟಗಾರಿಕೆ ಆಧಾರಿತ ಕೃಷಿ ಪದ್ಧತಿಯ ತರಬೇತಿ ಹಾಗೂ ಪರಿಕರಗಳ ವಿತರಣಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ಎರಡು ಎಕರೆಯಲ್ಲಿ ಒಂದು ಎಕರೆಯನ್ನು ಸಮಗ್ರ ಕೃಷಿ ಪದ್ಧತಿಗೆ ಅನುಸರಿಸಬೇಕು. ಇಂದು ತರಕಾರಿ, ಹಣ್ಣುಗಳ ದರ ಹೆಚ್ಚಾಗಿರುವ ಕಾರಣ ಆದಾಯ ಮಾತ್ರ ತಪ್ಪುವುದಿಲ್ಲ. ತೋಟಗಾರಿಕೆ ಕೃಷಿಮಾಡಲು ಹೆಚ್ಚು ನೀರು ಬೇಕಿಲ್ಲ. ಹನಿ ನೀರಾವರಿ ಬಳಸಬಹುದು. ಸರ್ಕಾರದಿಂದಲೂ ಹನಿ, ತುಂತುರು ನೀರಾವರಿಗೆ ಸಬ್ಸಿಡಿ ಕೊಡುವುದರಿಂದ ರೈತರು ಬಳಸಿಕೊಳ್ಳಬೇಕು ಎಂದು ಅವರು ಸಲಹೆ ನೀಡಿದರು.

<><*<><>*><>

ಬಿಬಿಎಂಪಿ ವ್ಯಾಪ್ತಿಯ ಜೆಪಿ ನಗರದ ಸಿಂಧೂರ ಕಲ್ಯಾಣ ಮಂಟಪದ ಸುತ್ತಮುತ್ತಲಿನ ಪ್ರದೇಶದಲ್ಲಿ ಪ್ರವಾಹ ತಡೆಯಲು ಕೈಗೆತ್ತಿಕೊಂಡಿರುವ ಮಳೆ ನೀರುಗಾಲುವೆ ಕಾಮಗಾರಿಯನ್ನು ವರ್ಷಾಂತ್ಯದೊಳಗೆ ಪೂರ್ಣಗೊಳಿಸಲು ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ನಗರದ ದಕ್ಷಿಣ ವಲಯ ವ್ಯಾಪ್ತಿಯಲ್ಲಿ ಇಂದು ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ವೇಳೆ ಮಾತನಾಡಿದ ಅವರು, ಜೆ.ಪಿ. ನಗರ ಸಿಂಧೂರ ಕಲ್ಯಾಣ ಮಂಟಪದಿಂದ ಕೆ-೨೧೦ ಕ್ಕೆ

ಸಂಪರ್ಕ ಕಲ್ಪಿಸಲು ೧.೩ ಕಿ.ಮೀ ಉದ್ದದ ಮಳೆ ನೀರುಗಾಲುವೆ ಕಾಮಗಾರಿಯನ್ನು ಕೈಗೆತ್ತಿಕೊಂಡಿದ್ದು, ಶೀಘ್ರ ಕಾಮಗಾರಿ ಪೂರ್ಣಗೊಳಿಸಿ ಈ ಪ್ರದೇಶದಲ್ಲಿ ಪ್ರವಾಹ ಆಗುವುದನ್ನು ತಪ್ಪಿಸಲು ಸೂಚಿಸಿದರು. ಹೊರ ವರ್ತುಲ ರಸ್ತೆಯ ಸೈಡ್ ಡ್ರೈನ್ ಗಳಲ್ಲಿ ಹೂಳೆತ್ತಿ ಸ್ವಚ್ಛತೆ ಕಾಪಾಡಬೇಕು. ಚರಂಡಿಗಳಿಂದ ತೆಗೆದ ಹೂಳನ್ನು ಸ್ಥಳದಲ್ಲಿಯೇ ಬಿಡದೆ ಕೂಡಲೇ ವಿಲೇವಾರಿ ಮಾಡುವ ಕೆಲಸ ಮಾಡಬೇಕು ಎಂದು ತಿಳಿಸಿದರು.

<><*<><>*><>

ಸಂಕ್ಷಿಪ್ತ ಸುದ್ದಿ

೧. ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಸರ್ಕಾರದ ಎಲ್ಲಾ ಇಲಾಖೆಗಳು ಮತ್ತು ಸರ್ಕಾರೇತರ ಸಂಘ ಸಂಸ್ಥೆಗಳ ಸಹಕಾರ ಅಗತ್ಯ ಎಂದು ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಮರಿಯಪ್ಪ ಹೇಳಿದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>